# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 31-03-2021 ಪ್ರಶ್ನೆ ಸಂಖ್ಯೆ : 350 (2495)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 31-03-2021

ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು

ವಿಷಯ : ರಾಜ್ಯ ಹೆದ್ದಾರಿಗಳನ್ನು ಟೋಲ್ ರಸ್ತೆಗಳನ್ನಾಗಿ ಮಾಡುತ್ತಿರುವ ಬಗ್ಗೆ

(ಅ) ಲೋಕೋಪಯೋಗಿ ಇಲಾಖೆಯ ರಾಜ್ಯ ಹೆದ್ದಾರಿಗಳನ್ನು ಟೋಲ್ ರಸ್ತೆಗಳನ್ನಾಗಿ ಮಾಡಲು ಸರ್ಕಾರ ಚಿಂತನೆ ನಡೆಸಿದೆಯೇ; ನಡೆಸಿದ್ದಲ್ಲಿ, ರಾಜ್ಯದ ಯಾವ ರಸ್ತೆಗಳನ್ನು ಟೋಲ್ ರಸ್ತೆಗಳನ್ನಾಗಿ ಮಾಡಲಾಗುವುದು;

(ಆ) ರಾಜ್ಯ ಹೆದ್ದಾರಿಗಳನ್ನು ಈ ರೀತಿಯಲ್ಲಿ ಟೋಲ್ ರಸ್ತೆಗಳನ್ನಾಗಿ ಮಾಡಿದ್ದಲ್ಲಿ ಜನರಿಗೆ ತೊಂದರೆಯಾಗುವುದಲ್ಲವೇ; ಈ ಟೋಲ್ ರಸ್ತೆಗಳನ್ನು ಮಾಡುವ ಮೊದಲು ಸರ್ವೀಸ್ ರಸ್ತೆಗಳನ್ನು ಮಾಡಲಾಗಿದೆಯೇ; ಈ ಸರ್ವೀಸ್ ರಸ್ತೆಗಳನ್ನು ಮಾಡುವುದು ಕಡ್ಡಾಯವಲ್ಲವೆ; (ಸರ್ಕಾರದ ಆದೇಶದ ಪ್ರತಿಯನ್ನು ಒದಗಿಸುವುದು)

(ಇ) ರಾಜ್ಯದ ಹೆದ್ದಾರಿಗಳನ್ನು ಟೋಲ್ ರಸ್ತೆಗಳನ್ನಾಗಿ ಮಾಡಲು ಇರುವ ನೀತಿ ಮತ್ತು ನಿಬಂಧನೆಗಳೇನು? (ಸರ್ಕಾರದ ಆದೇಶದ ಪ್ರತಿಗಳನ್ನು ಒದಗಿಸುವುದು)